# ಪುನರಾಯ್ಕೆಯಾದ ಪ್ರಧಾನಿ ನರೇಂದ್ರ ಮೋದಿ ಅವರನ್ನು ಅಭಿನಂದಿಸಿದ ಅಧ್ಯಕ್ಷ ಪುಟಿನ್

ಜೂನ್ 05, 2024

ಪ್ರಧಾನಿ ಶ್ರೀ ನರೇಂದ್ರ ಮೋದಿ ಅವರು ಇಂದು, ರಷ್ಯಾ ಒಕ್ಕೂಟದ ಅಧ್ಯಕ್ಷರಾದ ಘನತೆವೆತ್ತ ಶ್ರೀ ವ್ಲಾಡಿಮಿರ್ ಪುಟಿನ್ ಅವರಿಂದ ದೂರವಾಣಿ ಕರೆಯನ್ನು ಸ್ವೀಕರಿಸಿದರು.

ಅಧ್ಯಕ್ಷ ಪುಟಿನ್ ಅವರು ಸಾರ್ವತ್ರಿಕ ಚುನಾವಣೆಯಲ್ಲಿನ ಯಶಸ್ಸಿಗೆ ಪ್ರಧಾನಿ ಅವರನ್ನು ಹೃತ್ಪೂರ್ವಕವಾಗಿ ಅಭಿನಂದಿಸಿದರಲ್ಲದೇ ಐತಿಹಾಸಿಕ ಮೂರನೇ ಅವಧಿಗೆ ಶುಭಾಶಯಗಳನ್ನು ಕೋರಿದರು.

ಎಲ್ಲಾ ಕ್ಷೇತ್ರಗಳಲ್ಲಿಯೂ ಭಾರತ-ರಷ್ಯಾ ವಿಶೇಷವಾದ ಮತ್ತು ಉತ್ತಮ ವ್ಯೂಹಾತ್ಮಕ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಿ ಒಟ್ಟಾಗಿ ಕಾರ್ಯನಿರ್ವಹಿಸಲು ಉಭಯ ನಾಯಕರು ಒಪ್ಪಿಕೊಂಡರು.

ರಷ್ಯಾವು 2024 ರ ಬ್ರಿಕ್ಸ್ ಅಧ್ಯಕ್ಷ ಸ್ಥಾನ ಅಲಂಕರಿಸಿದ್ದಕ್ಕಾಗಿ, ಅಧ್ಯಕ್ಷ ಪುಟಿನ್ ಅವರಿಗೆ ಪ್ರಧಾನಿಯವರು ಶುಭಾಶಯಗಳನ್ನು ತಿಳಿಸಿದರು.

ಉಭಯ ನಾಯಕರು ಸದಾ ಸಂಪರ್ಕದಲ್ಲಿರಲು ಒಪ್ಪಿಕೊಂಡರು.

**ನವದೆಹಲಿ**
**ಜೂನ್ 05, 2024**